**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಬಗ್ಗೆ.

ಓದಲಾಗಿದೆ:-

1. 2016-17ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ ಸಂಖ್ಯೆ:195.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ತರಬೇತಿ-1/ಪ.ಪೂ.ತ/ಸಿಆರ್-5/2016-17, ದಿನಾಂಕ:17.01.2017.

******

ಪ್ರಸ್ತಾವನೆ:-

2016-17ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ ಸಂಖ್ಯೆ:195ರಲ್ಲಿ ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡಂತೆ ಘೋಷಣೆ ಮಾಡಿರುತ್ತಾರೆ.

"ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿರುವ 1 ಲಕ್ಷ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲಾಗುವುದು".

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿ 2016-17ನೇ ಸಾಲಿನ ಆಯವ್ಯಯ ಘೋಷಣೆಯನ್ವಯ 2016-17ನೇ ಸಾಲಿನಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವರ್ಷದಲ್ಲಿ 2 ಬಾರಿ ವೃತ್ತಿ ಮಾರ್ಗದರ್ಶನ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತರಬೇತಿ ನೀಡಲು ಮಾರ್ಗಸೂಚಿಗಳೊಂದಿಗೆ ಸರ್ಕಾರದಿಂದ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯು 882 ಬಿಎಂಎಸ್ 2016, ಬೆಂಗಳೂರು**
**ದಿನಾಂಕ: 19-01-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2016-17ನೇ ಸಾಲಿನಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್ ನಂತರ ವಿದ್ಯಾರ್ಥಿಗಳಿಗೆ ವರ್ಷದಲ್ಲಿ 2ಬಾರಿ ವೃತ್ತಿಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತರಬೇತಿಯನ್ನು ಅನುಬಂಧದಲ್ಲಿನ ಮಾರ್ಗಸೂಚಿಯನ್ವಯ ನೀಡಲು ಆದೇಶಿಸಲಾಗಿದೆ.

ಇದಕ್ಕೆ ತಗಲುವ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯ ವಲಯ ಯೋಜನೆ ಲೆಕ್ಕ ಶೀರ್ಷಿಕೆ 2225-03-277-2-37 ರಡಿ 2016-17ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

...2

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 03 ಟಿಎಫ್‌ಪಿ 2016 ದಿನಾಂಕ:02/04/2016ರಲ್ಲಿ ಆಯಾ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2), ಬೆಂಗಳೂರು
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲಾಧಿಕಾರಿಗಳು/ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು
4. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು.
5. ಖಜಾನೆ ಅಧಿಕಾರಿಗಳು, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ.

(3–6: ಆಯುಕ್ತರು, ಹಿಂವಕ, ಇವರ ಮುಖಾಂತರ)

**ಪ್ರತಿ:-**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ.
3. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.

# ಅನುಬಂಧ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತರಬೇತಿ ನೀಡಲು ಮಾರ್ಗಸೂಚಿಗಳು:

## I. ಯೋಜನೆಯ ಉದ್ದೇಶ:

1. ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿವಿಧ ಕೋರ್ಸ್‌ಗಳ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ತಾವು ಮುಂದೆ ಆಯ್ಕೆ ಮಾಡಿಕೊಳ್ಳಬೇಕಾದ ಕೋರ್ಸ್, ಲಭ್ಯವಿರುವ ಅವಕಾಶಗಳು, ವಿವಿಧ ಮಾದರಿಯ ಅಧ್ಯಯನಗಳು ಇತ್ಯಾದಿ ಬಗ್ಗೆ ವೃತ್ತಿ ಮಾರ್ಗದರ್ಶನ ನೀಡುವುದು.
2. ವಿದ್ಯಾರ್ಥಿಗಳು ಕೋರ್ಸ್ ಮುಗಿಸಿದ ನಂತರ ತೊಡಗಿಕೊಳ್ಳಬಹುದಾದ ಉದ್ಯೋಗವಕಾಶಗಳು, ವಿವಿಧ ರೀತಿಯ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುವುದು, ಕೇಂದ್ರ, ರಾಜ್ಯ ಸರ್ಕಾರ, ಸ್ವಾಯತ್ತ ಸಂಸ್ಥೆಗಳು, ಕಂಪನಿಗಳು ಹಾಗೂ ಖಾಸಗಿ ವಲಯದಲ್ಲಿನ ಉದ್ಯೋಗಗಳ ಬಗ್ಗೆ ಮಾಹಿತಿ ನೀಡುವುದು ಹಾಗೂ ಸಂದರ್ಶನಕ್ಕೆ ಸಿದ್ಧತೆ ಬಗ್ಗೆ ತಿಳಿಸುವುದು.

## II. ಯೋಜನೆಯ ಅನುಷ್ಠಾನ:

1. ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತರಬೇತಿ ನೀಡಲು ಈ ಕೆಳಗಿನಂತೆ ಜಿಲ್ಲಾ ಮಟ್ಟದ ಮೇಲುಸ್ತುವಾರಿ ಸಮಿತಿ ರಚಿಸಲಾಗಿದೆ.

| | | |
|---|---|---|
| 1) ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ | – | ಅಧ್ಯಕ್ಷರು/ಸದಸ್ಯರು |
| 2) ಅಪರ ಜಿಲ್ಲಾಧಿಕಾರಿಗಳು | – | ಸದಸ್ಯರು |
| 3) ಜಿಲ್ಲಾ ಉದ್ಯೋಗ ಮತ್ತು ವಿನಿಮಯ ಕೇಂದ್ರ ಅಧಿಕಾರಿ | – | ಸದಸ್ಯರು |
| 4) ಪ್ರಾಂಶುಪಾಲರು, DTI | – | ಸದಸ್ಯರು |
| 5) ಜಿಲ್ಲೆಯ ಪ್ರತಿಷ್ಠಿತ ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರದ ಮುಖ್ಯಸ್ಥರು (CEO, ZP ರವರಿಂದ ನಾಮ ನಿರ್ದೇಶಿತ) | – | ಸದಸ್ಯರು |
| 6) ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ | – | ಸದಸ್ಯ ಕಾರ್ಯದರ್ಶಿ |

ಮೇಲ್ಕಂಡ ಜಿಲ್ಲಾ ಮಟ್ಟದ ಸಮಿತಿಯು ಕಾಲಕಾಲಕ್ಕೆ ಸಭೆ ಸೇರಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತರಬೇತಿ ನಡೆಸುವ ಬಗ್ಗೆ ತೀರ್ಮಾನಿಸುವುದು.

2. ಜಿಲ್ಲೆಯಲ್ಲಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ದ್ವಿತೀಯ ಪಿ.ಯು.ಸಿ, ಅಂತಿಮ ಪದವಿ, ಅಂತಿಮ ಸ್ನಾತಕೋತ್ತರ ಪದವಿ, ಅಂತಿಮ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಹಾಗೂ ಐ.ಟಿ.ಐ, ಡಿಪ್ಲೋಮಾ ವಿದ್ಯಾರ್ಥಿಗಳ ಪಟ್ಟಿ ತಯಾರಿಸುವುದು.
3. ಅಂತಿಮ ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ (100 ಬಾಲಕರು, 100 ಬಾಲಕಿಯರು) ತಂಡ ರಚನೆ ಮಾಡುವುದು.

...4

4. ಪ್ರತಿ ಶೈಕ್ಷಣಿಕ ವರ್ಷದಲ್ಲಿ 2 ಬಾರಿ 01 ದಿನದ (ಅವಶ್ಯಕತೆಗೆ ತಕ್ಕಂತೆ) ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತರಬೇತಿ ಆಯೋಜಿಸುವುದು. ತರಬೇತಿ ನೀಡುವ ಸ್ಥಳವನ್ನು ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ರವರು ಈ ಕೆಳಗಿನ ಸ್ಥಳಗಳಲ್ಲಿ ಎಲ್ಲಾ ವ್ಯವಸ್ಥೆಗಳಿರುವುದನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಆಡಳಿತ ತರಬೇತಿ ಸಂಸ್ಥೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಇಂಜಿನಿಯರಿಂಗ್ ಕಾಲೇಜುಗಳ ಆಡಿಟೋರಿಯಂನಲ್ಲಿ ಏರ್ಪಡಿಸುವುದು.
5. ತರಬೇತಿ ನೀಡಲು ವೃತ್ತಿಪರ ಹಾಗೂ ನುರಿತ ವಿಷಯ ತಜ್ಞರು ಹಾಗೂ ಪ್ರತಿಷ್ಠಿತ ಕಂಪನಿಗಳ CEO, HR, ಸರ್ಕಾರಿ ಅಧಿಕಾರಿಗಳು, I.I.S.E, I.I.M. ಪ್ರಾಧ್ಯಾಪಕರು, ಪ್ರತಿಷ್ಠಿತ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಪ್ರಾಧ್ಯಾಪಕರು ಮತ್ತು ಇತರೆ ಸಂಪನ್ಮೂಲ ವ್ಯಕ್ತಿಗಳನ್ನು ಆಹ್ವಾನಿಸುವುದು.
6. ತರಬೇತಿ ನೀಡುವ ವಿಷಯ ತಜ್ಞರಿಗೆ ಪ್ರತಿ ದಿನಕ್ಕೆ ರೂ.2,500/-ಗಳ ಗೌರವ ಧನ ಪಾವತಿ ಮಾಡುವುದು.
7. ತರಬೇತಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಲೇಖನ ಸಾಮಗ್ರಿ ಹಾಗೂ ಲಘು ಉಪಹಾರಕ್ಕಾಗಿ ಒಬ್ಬ ವಿದ್ಯಾರ್ಥಿಗೆ ಗರಿಷ್ಠ ರೂ.50/-ಗಳನ್ನು ವೆಚ್ಚ ಮಾಡುವುದು.

**III. <u>ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತರಬೇತಿಗಳಲ್ಲಿ ಈ ಕೆಳಗಿನ ಅಂಶಗಳಿಗೆ ಒತ್ತು ನೀಡುವುದು.</u>**

1. ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಬಗ್ಗೆ ಮಾಹಿತಿ ನೀಡುವುದು. ವಿದ್ಯಾರ್ಥಿಯು ಆಯ್ಕೆ ಮಾಡಿಕೊಳ್ಳುವ ವಿಷಯದ ವ್ಯಾಪ್ತಿ ಮತ್ತು ಇರುವ ಅವಕಾಶಗಳ ಬಗ್ಗೆ ಮಾರ್ಗದರ್ಶನ.
2. ಹೊರರಾಜ್ಯ ಹಾಗೂ ವಿದೇಶಗಳಲ್ಲಿ ಅಧ್ಯಯನ ಮಾಡಬಹುದಾದ ವಿಷಯಗಳು ಮತ್ತು ಎದುರಿಸಬೇಕಾಗಿರುವ ಪರೀಕ್ಷೆಗಳ ಮಾಹಿತಿ. ವಿದೇಶಿ ವಿದ್ಯಾರ್ಥಿ ವೇತನ ಮತ್ತು ಫೆಲೋಷಿಪ್‌ಗಳ ಮಾಹಿತಿ.
3. ಇತ್ತೀಚಿನ ಟ್ರೆಂಡ್ ಹಾಗೂ ವಿದ್ಯಾರ್ಹತೆಗನುಗುಣವಾಗಿ ಲಭ್ಯವಿರುವ ಉದ್ಯೋಗವಕಾಶಗಳ ಮಾಹಿತಿ ನೀಡುವುದು.
4. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುವುದು, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಕೆ, ಹಾಜರಾಗುವುದು ಹಾಗೂ ಸಂದರ್ಶನ ಎದುರಿಸುವ ಬಗ್ಗೆ ಮಾನಸಿಕ ಸ್ಥೈರ್ಯ ತುಂಬುವುದು.
5. ಕೌಶಲ್ಯಾಧಾರಿತ ಉದ್ಯೋಗವಕಾಶಗಳು, ಲಭ್ಯವಿರುವ ಹಾಗೂ ಸ್ಥಳೀಯ ಅವಕಾಶಗಳ ಸದ್ಬಳಕೆ, ಚಿಕ್ಕ ಬಂಡವಾಳದೊಂದಿಗೆ ಸ್ವಂತ ಉದ್ದಿಮೆ ಸ್ಥಾಪನೆ ಹಾಗೂ ಕೇಂದ್ರ-ರಾಜ್ಯ ಸರ್ಕಾರಗಳ ಯೋಜನೆಗಳ ಸದ್ಬಳಕೆ ಇತ್ಯಾದಿ.

**IV. <u>ತರಬೇತಿ ಆಯೋಜನೆ ಹಾಗೂ ತರಬೇತಿ ವೆಚ್ಚ ಭರಿಸುವಿಕೆ.</u>**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ವೃತ್ತಿ ಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷೆ ಆಯೋಜನೆಗಾಗಿ ಪ್ರತಿ ಜಿಲ್ಲೆಗೆ ವಾರ್ಷಿಕ ರೂ.60,000/-ಗಳನ್ನು ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ರವರಿಗೆ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯವಲಯ ಯೋಜನೆಯಡಿ ಒದಗಿಸಲಾಗುವ ಅನುದಾನದಿಂದ ಒಂದೇ ಕಂತಿನಲ್ಲಿ ಬಿಡುಗಡೆಗೊಳಿಸುವುದು. ಬಿಡುಗಡೆಯಾದ ಅನುದಾನವನ್ನು ಮೇಲೆ ಹೇಳಲಾಗಿರುವ ವಿಧಾನದಲ್ಲಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ರವರು ನಿಯಮಾನುಸಾರ ವೆಚ್ಚ ಭರಿಸುವುದು.

...5

2. ತರಬೇತಿಯನ್ನು ವರ್ಷದಲ್ಲಿ ಪ್ರತಿ ವಿದ್ಯಾರ್ಥಿಗೆ 2 ಬಾರಿ ತಲುಪುವಂತೆ ವಾರ್ಷಿಕವಾಗಿ 2 ಬಾರಿ ಏರ್ಪಡಿಸುವುದು.

3. ತರಬೇತಿ ಆಯೋಜನೆ ಬಗ್ಗೆ Documentation ಮಾಡುವುದು. ತರಬೇತಿ ಪಡೆದ ವಿದ್ಯಾರ್ಥಿಗಳ Tracking System ಸಿದ್ದಪಡಿಸಿ, ಯೋಜನೆ ಉದ್ದೇಶ ಸಫಲತೆಯನ್ನು ಸಮಿತಿಯು ಪ್ರತಿ ವರ್ಷ Evaluation ಮಾಡುವುದು.

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ–2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.